**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 121(65) |
| ಸದಸ್ಯರ ಹೆಸರು | ಶ್ರೀ ಐವನ್ ಡಿ' ಸೋಜಾ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 03.03.2020 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | 2018–19, 2019–20ರಲ್ಲಿ ರಾಜ್ಯದಲ್ಲಿ ಎಷ್ಟು ಮಂದಿಗೆ ಮರಳುಗಾರಿಕೆಗಾಗಿ ಪರವಾನಿಗೆ ನೀಡಲಾಗಿದೆ; | • 2018–19 ಹಾಗೂ 2019–20 ನೇ ಸಾಲಿನ ಜನವರಿ–2020 ರ ಅಂತ್ಯದವರೆಗೆ ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಾವಳಿ, 2016 ರ ನಿಯಮಾವಳಿಯಂತೆ ನದಿ ಪಾತ್ರಗಳಲ್ಲಿ ಮರಳು ಗಣಿಗಾರಿಕೆಗೆ 237 ಮರಳು ಬ್ಲಾಕ್‌ಗಳನ್ನು ಸಾರ್ವಜನಿಕ ಟೆಂಡರ್–ಕಂ–ಹರಾಜು ಮೂಲಕ ಮರಳು ಗುತ್ತಿಗೆಗಳನ್ನು ಮಂಜೂರು ಮಾಡಲಾಗಿರುತ್ತದೆ.<br>• ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಾವಳಿ, 2016 ರ ನಿಯಮ 31-S ರಂತೆ ನದಿ ಪಾತ್ರಗಳಲ್ಲಿ 18 ಮರಳು ಬ್ಲಾಕ್‌ಗಳನ್ನು ಸರ್ಕಾರಿ ಕಾಮಗಾರಿಗಳಿಗೆ ಮೀಸಲಿರಿಸಿ ಮಂಜೂರು ಮಾಡಲಾಗಿರುತ್ತದೆ.<br>• ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಾವಳಿ, 2016 ರ ನಿಯಮ 31-ZA ರಂತೆ 44 ಪಟ್ಟಾ ಜಮೀನುಗಳಲ್ಲಿ ಮರಳು ಗಣಿಗಾರಿಕೆಗೆ ಲೈಸೆನ್ಸ್ ಜಾರಿ ನೀಡಲಾಗಿರುತ್ತದೆ.<br>• ಕರಾವಳಿ ನಿಯಂತ್ರಣ ವಲಯದ CRZ ನದಿ ಪಾತ್ರದ ವ್ಯಾಪ್ತಿಯಲ್ಲಿ ಕರ್ನಾಟಕ ಉಪ ಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಾವಳಿ, 2016 ರ ನಿಯಮ 31-B ರಂತೆ ಕೇಂದ್ರ ಸರ್ಕಾರದ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯದ ದಿನಾಂಕ 08.11.2011ರ ಆದೇಶದಂತೆ, ಕರಾವಳಿ ನಿಯಂತ್ರಣ ವಲಯದಲ್ಲಿ ಈ ಕೆಳಕಂಡಂತೆ ಮರಳು ದಿಬ್ಬಗಳನ್ನು ಗುರುತಿಸಿ, ತಾತ್ಕಾಲಿಕ ಪರವಾನಿಗೆಗಳನ್ನು ನೀಡಲಾಗಿರುತ್ತದೆ. |

| ಕ್ರ. ಸಂ. | ಜಿಲ್ಲೆ | 2018–19 | | 2019–20 | |
|---|---|---|---|---|---|
| | | ಮರಳು ದಿಬ್ಬಗಳ ಸಂಖ್ಯೆ | ತಾತ್ಕಾಲಿಕ ಪರವಾನಿಗೆಗಳ ಸಂಖ್ಯೆ | ಮರಳು ದಿಬ್ಬಗಳ ಸಂಖ್ಯೆ | ತಾತ್ಕಾಲಿಕ ಪರವಾನಿಗೆಗಳ ಸಂಖ್ಯೆ |
| 1. | ದಕ್ಷಿಣ ಕನ್ನಡ | 22 | 105 | 22 | 105 |
| 2. | ಉಡುಪಿ | 5 | 45 | 8 | 170 |
| 3. | ಉತ್ತರ ಕನ್ನಡ | 8 | 89 | – | – |
| | | 35 | 239 | 30 | 275 |

| | | |
|---|---|---|
| ಆ) | ಅಕ್ರಮ ಮರಳುಗಾರಿಕೆ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ; ಎಷ್ಟು ದಂಡವನ್ನು ವಸೂಲು ಮಾಡಲಾಗಿದೆ; | ರಾಜ್ಯದಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ರಾಜ್ಯ ಸರ್ಕಾರವು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994ಕ್ಕೆ ದಿನಾಂಕ 12.8.2016ರಂದು ತಿದ್ದುಪಡಿ ಮಾಡಿ ತಿದ್ದುಪಡಿ ನಿಯಮಗಳು 2016ನ್ನು ಜಾರಿಗೊಳಿಸಲಾಗಿರುತ್ತದೆ. ಸದರಿ ತಿದ್ದುಪಡಿ ನಿಯಮಗಳ ಪ್ರಮುಖ ಅಂಶಗಳು ಈ ಕೆಳಕಂಡಂತಿರುತ್ತವೆ.<br>• ಅನಧಿಕೃತ ಮರಳು ಗಣಿಗಾರಿಕೆ, ದಾಸ್ತಾನು, ಸಾಗಾಣಿಕೆಯನ್ನು ತಡೆಗಟ್ಟಲು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮರಳು ಸಮಿತಿ ಹಾಗೂ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಯನ್ನು ರಚಿಸಲಾಗಿರುತ್ತದೆ.<br>• ಮೇಲ್ಕಂಡ ಸಮಿತಿಯಲ್ಲಿ ಕಂದಾಯ, ಪೊಲೀಸ್, ಅರಣ್ಯ, ಲೋಕೋಪಯೋಗಿ, ಜಿಲ್ಲಾ ಪಂಚಾಯತ್, ಗಣಿ ಮತ್ತು ಭೂವಿಜ್ಞಾನ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳು ಸದಸ್ಯರುಗಳಾಗಿರುತ್ತಾರೆ. ಈ ಇಲಾಖೆಗಳ ಅಧಿಕಾರಿಗಳಿಗೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಯಲು ಗಣಿ ಮತ್ತು ಖನಿಜ(ಅಭಿವೃದ್ದಿ ಮತ್ತು ನಿಯಂತ್ರಣ) ಕಾಯ್ದೆ, 1957ರ ಕಲಂ 4(1), 4(1-A) ಮತ್ತು ಕಲಂ 21 ಮತ್ತು 22 ರಡಿಯಲ್ಲಿ ಹಾಗೂ ಕರ್ನಾಟಕ ಉಪ ಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2016ರ ನಿಯಮ 31–Rರ ಉಪ ನಿಯಮ (13) ರಡಿಯಲ್ಲಿ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಹಾಗೂ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲು ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ.<br>• ಅನಧಿಕೃತ ಮರಳು ಗಣಿಗಾರಿಕೆ/ಸಾಗಾಣಿಕೆಯನ್ನು ನಿಯಂತ್ರಿಸಲು ಜಿಲ್ಲಾ ಮರಳು ಉಸ್ತುವಾರಿ ಸಮಿತಿಗಳಿಂದ ರಾಜ್ಯದಲ್ಲಿ ಆಯಾಕಟ್ಟಿನ ಪ್ರದೇಶಗಳಲ್ಲಿ ಮರಳು ತನಿಖಾ ಠಾಣೆಗಳನ್ನು ತೆರೆದು ಕಾರ್ಯ ನಿರ್ವಹಿಸಲಾಗುತ್ತಿದೆ. ಅಲ್ಲದೆ ಆಯಾ ಜಿಲ್ಲಾ ವ್ಯಾಪ್ತಿಗಳಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಚಾಲಿತ ದಳವನ್ನು ರಚಿಸಿಕೊಂಡು ಅನಧಿಕೃತ ಮರಳು ಗಣಿಗಾರಿಕೆ / ಸಾಗಾಣಿಕೆಯನ್ನು ನಿಯಂತ್ರಿಸಲಾಗುತ್ತಿದೆ.<br>• ಅನಧಿಕೃತ ಮರಳು ಗಣಿಗಾರಿಕೆ ಮತ್ತು ಸಾಗಾಣಿಕೆ ನಿಯಂತ್ರಿಸಲು ಕರ್ನಾಟಕ ಉಪ ಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2016ರ ನಿಯಮ 31–Zರಂತೆ ಜಿಲ್ಲೆಗಳಿಗೆ ಬೇಡಿಕೆಗನುಸಾರ ಕಾರ್ಪಸ್ ಫಂಡ್‌ನ್ನು ಬಿಡುಗಡೆ ಮಾಡಲಾಗುತ್ತಿದ್ದು, ಜಿಲ್ಲಾ ಮತ್ತು ತಾಲ್ಲೂಕು ಮರಳು ಸಮಿತಿಗಳ ಎಲ್ಲಾ ಸದಸ್ಯ ಇಲಾಖೆಗಳ ಅಧಿಕಾರಿಗಳು ಈ ಅನುದಾನವನ್ನು ಬಳಕೆ ಮಾಡಿಕೊಂಡು ಅನಧಿಕೃತ ಮರಳು ಗಣಿಗಾರಿಕೆ / ಸಾಗಾಣಿಕೆಯನ್ನು ನಿಯಂತ್ರಿಸಲಾಗುತ್ತಿದೆ. |

<table>
<tr><td></td><td></td><td>

• ಅಲ್ಲದೆ ಸರ್ಕಾರವು ದಿನಾಂಕ 16.01.2017 ರಂದು ಕರ್ನಾಟಕ ಉಪ ಖನಿಜ ರಿಯಾಯಿತಿ ನಿಯಮಾವಳಿ, 1994 ಕ್ಕೆ ತಿದ್ದುಪಡಿ ತಂದಿದ್ದು, ತಿದ್ದುಪಡಿ ನಿಯಮ 43 ರ ಉಪ ನಿಯಮ 6, 7 ಮತ್ತು 8 ರಲ್ಲಿ ಪರವಾನಿಗೆ ಪಡೆಯದೆ ಮರಳು ಹಾಗೂ ಇನ್ನಿತರೆ ಉಪ ಖನಿಜಗಳ ಸಾಗಾಣಿಕೆ ಮಾಡುವ ವಾಹನಗಳನ್ನು ಜಪ್ತಿ ಪಡಿಸಿಕೊಂಡು ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲು ಹಾಗೂ ಜಪ್ತಿ ಪಡಿಸಿಕೊಂಡ ವಾಹನಗಳನ್ನು ಬಿಡುಗಡೆಗೊಳಿಸುವ ಸಂದರ್ಭದಲ್ಲಿ ವಾಹನ ಮೌಲ್ಯದ ಎರಡು ಪಟ್ಟು ಮೊತ್ತವನ್ನು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ವಾಹನ ಮಾಲೀಕರಿಂದ ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ.

ಮೇಲ್ಕಂಡ ನಿಯಮಗಳಡಿಯಲ್ಲಿ **2018-19** ರಿಂದ **2019-20** ನೇ ಸಾಲಿನಲ್ಲಿ ಅನಧಿಕೃತ ಮರಳು ಗಣಿಗಾರಿಕೆ, ಸಾಗಾಣಿಕೆ ಮತ್ತು ದಾಸ್ತಾನಿನಡಿಯಲ್ಲಿ ಒಟ್ಟು 5459 ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದ್ದು, ರೂ. 12.06 ಕೋಟಿ ದಂಡ ವಸೂಲಿ ಮಾಡಲಾಗಿರುತ್ತದೆ ಹಾಗೂ 3831 ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ.

<table>
<tr><th>ಕ್ರ ಸಂ.</th><th>ವರ್ಷವಾರು</th><th>ಪತ್ತೆಹಚ್ಚಿದ ಪ್ರಕರಣಗಳ ಸಂಖ್ಯೆ</th><th>ವಸೂಲಾದ ದಂಡ (ರೂ. ಲಕ್ಷಗಳಲ್ಲಿ)</th><th>ದಾಖಲಿಸಿದ ಮೊಕದ್ದಮೆಗಳ ಸಂಖ್ಯೆ</th></tr>
<tr><td>1.</td><td>2018-19</td><td>3869</td><td>910.38</td><td>2893</td></tr>
<tr><td>2.</td><td>2019-20</td><td>1590</td><td>296.08</td><td>938</td></tr>
<tr><td colspan="2">ಒಟ್ಟು</td><td>5459</td><td>1206.46</td><td>3831</td></tr>
</table>

</td></tr>
<tr><td>ಇ)</td><td>ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 'ಸ್ಯಾಂಡ್ ಬಜಾರ್' ಮೂಲಕ ಮರಳು ಖರೀದಿಸುವ ಯೋಜನೆ ಜಾರಿಯಲ್ಲಿದೆಯೇ; ಇದರಿಂದ ಸರ್ಕಾರಕ್ಕೆ ಬರುವ ಆದಾಯ ಎಷ್ಟು; ಎಷ್ಟು ಟನ್ ಮರಳು ದೊರಕಿಸಿ ಕೊಡಲಾಗಿದೆ; (ವಿವರ ನೀಡುವುದು)</td><td>

ಜಾರಿಯಲ್ಲಿರುತ್ತದೆ.

ಸದರಿ ಸ್ಯಾಂಡ್ ಬಜಾರ್ ಆ್ಯಪ್ ಮೂಲಕ ಇದುವರೆಗೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ **79000** ಮೆಟ್ರಿಕ್ ಟನ್ ಮರಳನ್ನು ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ಪೂರೈಸಲಾಗಿದ್ದು, ಸರ್ಕಾರಕ್ಕೆ ರಾಜಧನ ಸೇರಿದಂತೆ **ರೂ.93.69** ಲಕ್ಷಗಳು ಸಂಗ್ರಹವಾಗಿರುತ್ತದೆ.

</td></tr>
<tr><td>ಈ)</td><td>ನೆರೆ ರಾಜ್ಯಗಳಿಗೆ ಅಕ್ರಮ ಮರಳು ಸಾಗಾಟ ಮಾಡುವುದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಎಷ್ಟು ಮಂದಿ ಈ ಕೃತ್ಯಗಳಲ್ಲಿ ಭಾಗಿಯಾಗಿದ್ದಾರೆ; (ವಿವರ ನೀಡುವುದು)</td><td>

ನೆರೆ ರಾಜ್ಯಗಳಿಗೆ ಅಕ್ರಮವಾಗಿ ಮರಳು ಹಾಗೂ ಇತರೆ ಖನಿಜ ಸಾಗಾಣಿಕೆ ವಾಹನಗಳನ್ನು ತಡೆಗಟ್ಟಲು ಸಂಬಂಧಪಟ್ಟ ಜಿಲ್ಲಾ ಮರಳು ಸಮಿತಿಗಳಿಂದ ಗಡಿ ಭಾಗದಲ್ಲಿ ತನಿಖಾ ಠಾಣೆಗಳನ್ನು ಸ್ಥಾಪಿಸಿಕೊಂಡು ಹೊರ ರಾಜ್ಯಗಳಿಗೆ ಸಾಗಾಟವಾಗುವ ಅಕ್ರಮ ಮರಳು ಸಾಗಾಣಿಕೆಯನ್ನು ತಡೆಹಿಡಿಯಲಾಗುತ್ತಿದೆ.

ಮುಂದುವರೆದು, ಆಯಾ ಗಡಿ ಭಾಗದ ಜಿಲ್ಲಾ ಮರಳು ಸಮಿತಿಗಳಿಂದ ಚಾಲಿತ ದಳಗಳನ್ನು ರಚಿಸಿಕೊಂಡು ಗಡಿ ಭಾಗದಲ್ಲಿ ಗಸ್ತು ತಿರುಗಿ ರಾಜ್ಯದಿಂದ ನೆರೆ ರಾಜ್ಯಗಳಿಗೆ ಮರಳು ಸಾಗಾಣಿಕೆ ಮಾಡುವ ವಾಹನಗಳನ್ನು ತಪಾಸಣೆ ಮಾಡಲಾಗುತ್ತಿದೆ.

</td></tr>
</table>

--4

| | | |
|---|---|---|
| | | ರಾಜ್ಯದ ಗಡಿ ಭಾಗದ ಜಿಲ್ಲೆಗಳಲ್ಲಿ 18 ತನಿಖಾ ಠಾಣೆಗಳನ್ನು ಸ್ಥಾಪಿಸಿ ಹೊರ ರಾಜ್ಯಗಳಿಗೆ ಸಾಗಾಣಿಕೆಯಾಗುವ ಮರಳಿನ ವಾಹನಗಳನ್ನು ತಪಾಸಣೆ ನಡೆಸಲಾಗುತ್ತಿದೆ.<br>2019–20ನೇ ಸಾಲಿನಲ್ಲಿ ಜನವರಿ ಅಂತ್ಯದವರೆಗೆ ಅನಧಿಕೃತವಾಗಿ ಹೊರ ರಾಜ್ಯಗಳಿಗೆ ಮರಳು ಸಾಗಾಣಿಕೆ ಮಾಡಲಾಗುತ್ತಿದ್ದ **23** ವಾಹನಗಳನ್ನು ಜಪ್ತಿ ಪಡಿಸಿಕೊಂಡು ಸಂಬಂಧಪಟ್ಟ ಪೋಲಿಸ್ ಠಾಣೆ / ಮಾನ್ಯ ನ್ಯಾಯಾಲಯಗಳಲ್ಲಿ **22** ಮೊಕದ್ದಮೆಗಳನ್ನು ದಾಖಲಿಸಲಾಗಿರುತ್ತದೆ. |
| ಉ) | CRZ ಮತ್ತು Non CRZ ವರ್ಗೀಕರಣದಿಂದ ಇಲಾಖೆಗೆ ಆಗಿರುವ ಲಾಭವೇನು; (ವಿವರ ನೀಡುವುದು)? | • ಕರಾವಳಿ ತೀರ ಪ್ರದೇಶಗಳ ಸಂರಕ್ಷಣೆ ಮತ್ತು ಕರಾವಳಿ ತೀರ ಪ್ರದೇಶಗಳಲ್ಲಿ ವಾಸಿಸುವ ಮೀನುಗಾರರು ಹಾಗೂ ಇತರೆ ಸ್ಥಳೀಯ ಸಮುದಾಯಗಳ ಜೀವನೋಪಾಯದ ರಕ್ಷಣೆಗಾಗಿ ಭಾರತ ಸರ್ಕಾರದ ಅರಣ್ಯ, ಪರಿಸರ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯವು ದಿನಾಂಕ 06.01.2011 ರಂದು ಕರಾವಳಿ ನಿಯಂತ್ರಣ ವಲಯ {Coastal Regulation Zone (CRZ)} ಪ್ರದೇಶಗಳೆಂದು ಅಧಿಸೂಚನೆ ಹೊರಡಿಸಿರುತ್ತದೆ. ಸದರಿ CRZ ಗಳ ಪ್ರದೇಶಗಳ ವ್ಯಾಪ್ತಿಯಲ್ಲಿ ಹೊಸ ಕೈಗಾರಿಕೆ ಸ್ಥಾಪನೆ, ವಿಸ್ತರಣೆ, ಗಣಿಗಾರಿಕೆ, ಅಪಾಯಕಾರಿ ವಸ್ತುಗಳ ತಯಾರಿಕೆ ಅಥವಾ ನಿರ್ವಹಣೆ ಅಥವಾ ಸಂಗ್ರಹಣೆ ಅಥವಾ ವಿಲೇವಾರಿ ಹಾಗೂ ಇನ್ನಿತರ ಚಟುವಟಿಕೆಗಳನ್ನು ನಿಷೇಧಿಸಲಾಗಿರುತ್ತದೆ.<br>• ನಂತರ, ಕರ್ನಾಟಕ ರಾಜ್ಯ ಸರ್ಕಾರದ ಮನವಿಯ ಮೇರೆಗೆ ಕೇಂದ್ರ ಪರಿಸರ ಮತ್ತು ಅರಣ್ಯ ಮಂತ್ರಾಲಯದ ಅಧಿಕೃತ ಜ್ಞಾಪನ ಸಂಖ್ಯೆ: O.M.NO 11-83/2005, ದಿನಾಂಕ 08.11.2011 ರಂತೆ ಕರಾವಳಿ ಜಿಲ್ಲೆಗಳ CRZ ವ್ಯಾಪ್ತಿಯಲ್ಲಿ ಹರಿಯುವ ನದಿ ಪಾತ್ರಗಳಲ್ಲಿ ಸರಾಗವಾಗಿ ನೀರು ಹರಿಯುವಿಕೆ ಮತ್ತು ದೋಣಿಗಳ ಚಲನವಲನಕ್ಕೆ ಧಕ್ಕೆಯಾಗುವ ಮರಳು ದಿಬ್ಬಗಳನ್ನು ಮಾನವ ಶ್ರಮದಿಂದ ತೆರವುಗೊಳಿಸಲು ಅನುಮತಿಯನ್ನು ನೀಡಲಾಗುತ್ತಿದೆ. ಅದರಂತೆ ಕರಾವಳಿ ಜಿಲ್ಲೆಗಳ CRZ ನದಿ ಪಾತ್ರದ ವ್ಯಾಪ್ತಿಯಲ್ಲಿ ಮರಳು ದಿಬ್ಬಗಳನ್ನು ತೆರವುಗೊಳಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br>• ಕರಾವಳಿ ಜಿಲ್ಲೆಗಳ ಕರಾವಳಿ ನಿಯಂತ್ರಣ ವಲಯ ಹೊರತು ಪಡಿಸಿದ ರಾಜ್ಯದ ಇತರೆ ಎಲ್ಲಾ ಜಿಲ್ಲೆಗಳ ನದಿ ಪಾತ್ರಗಳಲ್ಲಿ ಮರಳು ಗಣಿಗಾರಿಕೆಗೆಯನ್ನು ಕರ್ನಾಟಕ ಉಪಖನಿಜ ರಿಯಾಯಿತಿ **(ತಿದ್ದುಪಡಿ)** ನಿಯಮಾವಳಿ, 2016 ರಂತೆ ನಿರ್ವಹಿಸಲಾಗುತ್ತಿದೆ. |

ಸಂಖ್ಯೆ: ಸಿಐ 81 ಎಂಎಂಎನ್ 2020

(ಸಿ.ಸಿ. ಪಾಟೀಲ)

ಗಣಿ ಮತ್ತು ಭೂವಿಜ್ಞಾನ ಸಚಿವರು